# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರು (ಪಂ.ರಾಜ್) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ರವರಿಗೆ ಕಾರ್ಯ ಹಂಚಿಕೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆರ್ ಡಿಪಿಆರ್ 52 ಜಿಪಿಎಸ್ 2020, ದಿನಾಂಕ:07-05-2020.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 469 ಗ್ರಾಪಂಅ 2020 (1), ದಿನಾಂಕ:08-06-2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:07-05-2020ರ ಆದೇಶದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯವನ್ನು ಸ್ಥಾಪಿಸಲಾಗಿದೆ. ಸದರಿ ಆದೇಶದಲ್ಲಿ ಆಯುಕ್ತರ ಹುದ್ದೆಯನ್ನು ಸಹ ಸೃಜಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ:08-06-2020 ರ ಆದೇಶದಲ್ಲಿ ಆಯುಕ್ತಾಲಯದ ರಚನೆಯ ಸ್ವರೂಪವನ್ನು ಮತ್ತು ಆಯುಕ್ತಾಲಯದ ಆಯುಕ್ತರು, ನಿರ್ದೇಶಕರು, ಜಂಟಿ ನಿರ್ದೇಶಕರು ಹಾಗೂ ಉಪನಿರ್ದೇಶಕರುಗಳಿಗೆ ಅಧಿಕಾರ ಮತ್ತು ಪ್ರಕಾರ್ಯಗಳನ್ನು ನಿರ್ದಿಷ್ಟಪಡಿಸಲಾಗಿದೆ. ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರು (ಪಂ.ರಾಜ್) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ರವರಿಗೆ ಕಾರ್ಯ ಹಂಚಿಕೆ ಮಾಡಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂ: ಗ್ರಾಅಪ 469 ಗ್ರಾಪಂಅ 2020 (2), ಬೆಂಗಳೂರು, ದಿ:08-06-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರು (ಪಂ.ರಾಜ್) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ರವರಿಗೆ ಈ ಕೆಳಕಂಡಂತೆ ಕಾರ್ಯ ಹಂಚಿಕೆ ಮಾಡಿ ಆದೇಶಿಸಿದೆ .

**ವಿಷಯಗಳು:-**

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣಗಳು, ನಿಯಮಗಳು, ಉಪವಿಧಿಗಳ ತಿದ್ದುಪಡಿ.

2. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯಡಿ ಬರುವ ರಾಜ್ಯ ಚುನಾವಣಾ ಆಯೋಗ.

3. ರಾಜ್ಯ ಪಂಚಾಯತಿ ಪರಿಷತ್ತು.

4. ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಸೇವೆಗಳು.

5. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ.

6. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ.

7. ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಮತ್ತು ಅಭಿವೃದ್ಧಿ ಯೋಜನೆ.

8. ಕೇಂದ್ರ ಹಣಕಾಸು ಆಯೋಗದ ಅನುದಾನ ಬಿಡುಗಡೆ.

9. ಕರ್ನಾಟಕ ಪಂಚಾಯತ್ ರಾಜ್ ಅನುದಾನ ಬಿಡುಗಡೆ.

10. ರಾಷ್ಟ್ರೀಯ ಗ್ರಾಮ ಸ್ವರಾಜ್ ಪಂಚಾಯತ್ ಸಶಕ್ತಿಕರಣ ಅಭಿಯಾನ ಅನುದಾನ ಬಿಡುಗಡೆ.

11. ಸಾರ್ವಜನಿಕ ಕುಂದು ಕೊರತೆ ನಿವಾರಣಾ ಪ್ರಾಧಿಕಾರ.

12. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯಡಿ ಬರುವ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಅಧಿಕಾರಿ/ಹಣಕಾಸು ದುರುಪಯೋಗ/ದುರ್ವರ್ತನೆ ಪ್ರಕರಣಗಳು.

13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರು ಕಾಲಕಾಲಕ್ಕೆ ವಹಿಸುವ ಇನ್ನಿತರ ವಿಷಯಗಳು.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಕ್ರಮವಾಗಿ ಟಿಪ್ಪಣಿ ಸಂಖ್ಯೆ: RDPR 52 GPS 2020 (ಭಾ-1) ರ ಕಂಡಿಕೆ 6 ರಲ್ಲಿ ದಿನಾಂಕ: 30-01-2020 ಮತ್ತು FD 35 Exp-6/2020 (e office) dated:06-05-2020 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ,**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-560001 ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು;
2. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.

3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಅಭಿವೃದ್ಧಿ ಆಯುಕ್ತರು ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
8. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರ್ಗಿ ಮತ್ತು ಬೆಳಗಾವಿ ವಿಭಾಗಗಳು.
10. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
11. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು.
12. ವ್ಯವಸ್ಥಾಪಕ ನಿರ್ದೇಶಕರು, ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
15. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
16. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
17. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು..
18. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
19. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
20. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

**<u>ಪ್ರತಿ:</u>**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಉಪ ಕಾರ್ಯದರ್ಶಿ (ಆಡಳಿತ-1/ಆಡಳಿತ-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ನಿರ್ದೇಶಕರು (ಪಂ.ರಾಜ್-1/2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.